Bruhat Bangaluru Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ನೋಡೆಲ್ ಅಧಿಕಾರಿಗಳು/ಸಹಾಯಕ ಅಭಿಯಂತರರ ಕಛೇರಿ ನಾಗಪುರ ಉಪವಿಭಾಗ, ಬಿ.ಬಿ.ಎಂ.ಪಿ,
12ನೇ ಮುಖ್ಯರಸ್ತೆ, 11ನೇ ಕ್ರಾಸ್, ನಾಗಪುರ, ಬಿಬಿಎಂಪಿ ಕಛೇರಿ ಸಂಕೀರ್ಣ ಕಟ್ಟಡ, ಮಹಾಲಕ್ಷ್ಮೀಲೇಔಟ್, ಬೆಂಗಳೂರು-86.

## ದಿನಾಂಕ:-17-12-2022 ರಂದು ನಡೆದ ವಾರ್ಡ್ ಸಂಖ್ಯೆ:67ರ ಹಾಗು ಹೊಸ ವಾರ್ಡ್ ಸಂಖ್ಯೆ:51ರ ವಾರ್ಡ್ ಸಮಿತಿ ಸಭೆಯ ನಡವಳಿ

ಉಲ್ಲೇಖ:- (1) ಸಮಿತಿ ಸಭೆ ಸೂಚಿ ಪತ್ರ ಸಂಖ್ಯೆ:ಬಿ12(5)/ಪಿಆರ್/35/2020-21 ದಿನಾಂಕ:21:09:2020
(2)ಸಭೆ ಸೂಚನಾ ಪತ್ರ ಸಂ. ಸ.ಅ./ವಾ-67/ಪಿ.ಆರ್/56/2022-23 ದಿನಾಂಕ:14-12-2022

| ಕ್ರ.ಸ. | ಶ್ರೀಯುತರ ಹೆಸರು | ಹುದ್ದೆ |
|---|---|---|
| 1. | ಶ್ರೀ. ಕೇಶವ ಮೂರ್ತಿ | ಸಹಾಯಕ ನಿರ್ದೇಶಕರು ನಗರ ಯೋಜನೆ, ಬಿ.ಬಿ.ಎಂ.ಪಿ. |
| 2. | ಶ್ರೀ. ಬಿ. ಸಿ ರವಿಕುಮಾರ್ | ಸಹಾಯಕ ಅಭಿಯಂತರರು, ವಾರ್ಡ-67. |
| 3. | ಶ್ರೀ. ಉದಯಶಂಕರ್ | 1ನೇ ಆರ್ ಬ್ಲಾಕ್ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರು ಹಾಗು ವಾರ್ಡ್ ಸಮಿತಿ ಸದಸ್ಯರು. |
| 4. | ಶ್ರೀಮತಿ. ಗೀತಾ ಕಿನಾಲ್ | ವಾರ್ಡ್ ಸಮಿತಿ ಸದಸ್ಯರು. |
| 5. | ಶ್ರೀ. ಗುರುಮೂರ್ತಿ | ಘ.ತ್ಯಾ.ನಿ ಪರೀವಿಕ್ಷಕರು. |
| 6. | ಶ್ರೀ. ಮಂಜುನಾಥ್. | ತೋಟಗಾರಿಕೆ ಇಲಾಖೆ, ಮೇಸ್ತ್ರೀ. |
| 7. | ಶ್ರೀ. ಗಿರೀಶ್ | ಕೆಲಸ ಪರಿವಿಕ್ಷಕರು, ಬೆ.ಒ.ಮಂ |
| 8. | ಶ್ರೀ. ಆನಂದ್ ಮೂರ್ತಿ | ಸಹಾಯಕ ಅಭಿಯಂತರರು, ಬೆಸ್ಕಂ. |
| 9. | ಶ್ರೀ. ಬಾಲು | ಬೀದಿ ದೀಪ ಗುತ್ತಿಗೆದಾರರು. |
| 10. | ಸಹಾಯಕ ಅಭಿಯಂತರರು, ಬೋರ್ವೆಲ್ ನಿರ್ವಹಣೆ. | ಗೈರು ಹಾಜರಿ. |
| 11. | ಕಿರಿಯ ಆರೋಗ್ಯ ಪರೀವಿಕ್ಷಕರು | ಗೈರು ಹಾಜರಿ. |
| 12. | ಸುಬ್ರಮಣ್ಯನಗರ ಪೋಲಿಸ್ ಠಾಣೆ. | ಗೈರು ಹಾಜರಿ. |
| 13. | ಮಲ್ಲೇಶ್ವರಂ ಸಂಚಾರಿ ಪೊಲೀಸ್ ಠಾಣೆ. | ಗೈರು ಹಾಜರಿ. |
| 14. | ಮಹಾಲಕ್ಷ್ಮೀಲೇಔಟ್ ಪೊಲೀಸ್ ಠಾಣೆ. | ಗೈರು ಹಾಜರಿ. |
| 15. | ಅರಣ್ಯಾಧಿಕಾರಿಗಳು | ಗೈರು ಹಾಜರಿ. |
| 16. | ಕಿರಿಯ ಆರೋಗ್ಯ ಪರೀವಿಕ್ಷಕರು | ಗೈರು ಹಾಜರಿ. |
| 17. | ವಾರ್ಡ್ ಮಾರ್ಷಲ್ | ಗೈರು ಹಾಜರಿ. |



17/12/22

ಮು.ತಿ.ನೋ.

Scanned by CamScanner

ವಾರ್ಡ್ ಸಮಿತಿ ಸಭೆಯ ಕಾರ್ಯದರ್ಶಿಗಳು ಮಾತನಾಡಿ ಸೆಪ್ಟೆಂಬರ್ ಮಾಹೆಯ ದಿ: 17/12/2022 ರಂದು ಬೆಳ್ಳಿಗೆ 9:30 ಘಂಟೆಗೆ ವಾರ್ಡ್ ಸಮಿತಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ಅಭಿವೃದ್ಧಿ ಹಾಗೂ ಕುಂದುಕೊರತೆಗಳ ಬಗ್ಗೆ ಚರ್ಚಿಸಲು ಕರೆದಿರುವ ಸಭೆಗೆ ಆಗಮಿಸಿರುವ ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು, ಮತ್ತು ಸಮಿತಿ ಸದಸ್ಯರಿಗೆ ಸ್ವಾಗತ ಕೋರಿದರು. ಹಾಗೂ ವಾರ್ಡ್ ಸಂಖ್ಯೆ:67ರ ವಾಸ್ತವದ ಬಗ್ಗೆ ಕಿರು ಪರಿಚಯವನ್ನು ಮಂಡಿಸಿದರು.

ಮಾನ್ಯ ವಾರ್ಡ್ ಸಮಿತಿ ಅಧ್ಯಕ್ಷರು, ಮಾತನಾಡಿ ಸಮಿತಿಯ ಸದಸ್ಯರು ಮತ್ತು ಸ್ಥಳೀಯ ಸಾರ್ವಜನಿಕರು ತಮ್ಮ ತಮ್ಮ ಅವಹಾಲುಗಳನ್ನು ತಿಳಿಸಬೇಕೆಂದು ತಿಳಿಸಿದ ಹಿನ್ನೆಲೆಯಲ್ಲಿ ಸಮಿತಿಯ ಸದಸ್ಯರು ಈ ಕೆಳಕಂಡಂತೆ ವಾರ್ಡ್‌ನಲ್ಲಿ ಕಂಡುಬಂದಿರುವ ಸಮಸ್ಯೆಗಳನ್ನು ಸಭೆಗೆ ಮಂಡಿಸಿದರು.

## ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:

| | |
|---|---|
| ಶ್ರೀಮತಿ. ಗೀತಾ ಕಿನಾಲ್ ವಾರ್ಡ್ ಸಮಿತಿ ಸದಸ್ಯರು. | ವಾರ್ಡ್‌ನ ರಾಜಾಜಿನಗರ 1ನೇ ಬ್ಲಾಕ್‌ನಲ್ಲಿ ರಸ್ತೆ ಚರಂಡಿ ಕಾಮಗಾರಿ ಕೆಲಸ ಮಾಡುತ್ತಿದ್ದು ಸದರಿ ಚರಂಡಿಯಲ್ಲಿ ಹಿಂಗು ಗುಂಡಿಯನ್ನು ಎರೆಡು ಮನೆ ಮಧ್ಯದಲ್ಲಿ ಮಾಡಲು ತಿಳಿಸಿದರು. |
| ಶ್ರೀ. ಬಿ. ಸಿ ರವಿಕುಮಾರ್ ಸಹಾಯಕ ಅಭಿಯಂತರರು, ವಾರ್ಡ–67 | ವಾರ್ಡ್‌ನ ರಾಜಾಜಿನಗರ 1ನೇ ಎನ್ ಬ್ಲಾಕ್‌ನ ವಾರ್ಡ್ ಸಮಿತಿ ಸದಸ್ಯರು ತಿಳಿಸಿರುವಂತೆ ~~ಕ್ರಮವಹಿಸುವಂತೆ ಸಭೆಯಲ್ಲಿ ತಿಳಿಸಿದರು~~. [illegible] |
| ಶ್ರೀ. ಗಿರೀಶ್ ಕೆಲಸ ಪರಿವೀಕ್ಷಕರು, ಬೆ.ಜ.ಮಂ | ವಾರ್ಡ್‌ನ ವಿಧ್ಯವರ್ಧಕ ಶಾಲೆ ಹತ್ತಿರ ನಾಯಿ ಹಾವಳಿ ಹೆಚ್ಚಾಗಿರುವುದಾಗಿ ಸಭೆಯಲ್ಲಿ ತಿಳಿಸಿದರು. |
| ಶ್ರೀ. ಬಿ. ಸಿ ರವಿಕುಮಾರ್ ಸಹಾಯಕ ಅಭಿಯಂತರರು, ವಾರ್ಡ–67 | ವಾರ್ಡ್‌ನ ಪಶು ಕೆಲಸ ವಿಭಾಗದವರು ಸಭೆಗೆ ಗೈರು ಹಾಜರಿದ್ದು ವಿಧ್ಯವರ್ಧಕ ಶಾಲೆ ಹತ್ತಿರ ನಾಯಿ ಹಾವಳಿ ದೂರಿನ ಬಗ್ಗೆ ಕ್ರಮವಹಿಸಲು ತಿಳಿಸಿದರು. |
| ಶ್ರೀ. ಕೇಶವಮೂರ್ತಿ ನೋಡೆಲ್ ಅಧಿಕಾರಿಗಳು | ವಾರ್ಡ್‌ನ ರಸ್ತೆ ಗುಂಡಿಯಿದ್ದಲ್ಲಿ 3 ದಿನಗಳೊಳಗೆ ತಾಂತ್ರಿಕವಾಗಿ ಮುಚ್ಚಲು ಸಭೆಯಲ್ಲಿ ಹಾಜರಿದ್ದ ಸಹಾಯಕ ಅಭಿಯಂತರರಿಗೆ ತಿಳಿಸಿದರು. |
| ಶ್ರೀ. ಬಿ. ಸಿ ರವಿಕುಮಾರ್ ಸಹಾಯಕ ಅಭಿಯಂತರರು, ವಾರ್ಡ–67 | ವಾರ್ಡ್‌ನ ನೋಡೆಲ್ ಅಧಿಕಾರಿಗಳು ಸೂಚಿಸಿರುವಂತೆ ಕ್ರಮವಹಿಸುವುದಾಗಿ ಸಭೆಯಲ್ಲಿ ತಿಳಿಸಿದರು. |

ವಾರ್ಡ್ ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಭಾನಡವಳಿಗಳಿಗೆ ಅನುಸಾರವಾಗಿ ತಮ್ಮ ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ಪಟ್ಟಿ ಮಾಡಿಕೊಂಡು ಸದರಿ ದೂರುಗಳನ್ನು ಸರಿಪಡಿಸಿರುವ ಬಗ್ಗೆ ಅಥವಾ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ದೃಢೀಕೃತ ಮಾಹಿತಿಗಳನ್ನು ತಪ್ಪದೇ ವಾರ್ಡ್ ಕಮಿಟಿ ವಾರ್ಡ್–67 ವಾಟ್ಸ್ ಆಪ್ ಗ್ರೂಪ್ ನಲ್ಲಿ ಮತ್ತು ಪ್ರತಿ ವಾರ್ಡ್ ಸಮಿತಿ ಸಭೆಯಲ್ಲಿ ವರದಿ ಮಾಡಲು ಸೂಚಿಸುತ್ತಾ, ಸಭೆಯನ್ನು ಮುಕ್ತಾಯಗೊಳಿಸಲಾಯಿತು. ಸಭೆಯ ಕೊನೆಯಲ್ಲಿ ಸಮಿತಿ ಕಾರ್ಯದರ್ಶಿ ರವರು ಸಮಿತಿ ಸಭೆಗೆ ಆಗಮಿಸಿರುವ ಎಲ್ಲರಿಗೂ ವಂದಿಸಿದರು.

**ಪ್ರತಿಯನ್ನು**

1. ಮಾನ್ಯ ವಲಯ ಉಪಆಯುಕ್ತರು (ಆಡಳಿತ), ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3. ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ಕೇಂದ್ರ ರವರ ಅವಗಾಹನ ಸಲ್ಲಿಸಿದೆ.
6. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
8. ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.

ಮು.ತಿ.ನೋ.

Sheeath 17/12/22



Scanned by CamScanner

9. ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12. ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14. ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ಪಶ್ಚಿಮ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16. ಕಛೇರಿಯ ಕಡತಕ್ಕೆ.

**ಕಾರ್ಯದರ್ಶಿ ಹಾಗೂ**
**ಸಹಾಯಕ ಅಭಿಯಂತರರು, ವಾರ್ಡ್– 67**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ಅಧ್ಯಕ್ಷರು ಹಾಗೂ**
**ನೋಡಲ್ ಅಧಿಕಾರಿಗಳು ವಾರ್ಡ್– 67**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

Scanned by CamScanner